ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಎ.ಪಿ.ಎಲ್. ಮತ್ತು ಬಿ,ಪಿ.ಎಲ್. ಕಾರ್ಡ್‌ಗಳ ವಿತರಣೆ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

22 (176) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕಳೆದ 2 ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಕುಟುಂಬಗಳಿಗೆ ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡ್‌ಗಳನ್ನು ವಿತರಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ಎಷ್ಟು ಬೋಗಸ್ ಬಿ.ಪಿ.ಎಲ್. ಕಾರ್ಡ್‌ಗಳು ವಿತರಣೆಯಾಗಿವೆ; ಇದನ್ನು ವಿತರಣೆ ಮಾಡಿದ ಅಧಿಕಾರಿಗಳ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಎ.ಪಿ.ಎಲ್ ಮತ್ತು ಬಿ.ಪಿ.ಎಲ್. ಕಾರ್ಡ್‌ಗಳನ್ನು ಕೋರಿ ಹೊಸದಾಗಿ ಎಷ್ಟು ಅರ್ಜಿಗಳು ಬಂದಿವೆ ; ಯಾವಾಗ ಹಂಚಿಕೆ ಮಾಡಲಾಗುವುದು ?